ಆಂದೋಲನ

ದಿನಪತ್ರಿಕೆ

ಸಂಪಾದಕ : ರಾಜಶೇಖರ ಕೋಟಿ

ಕೆಪಿಎಲ್‌ಗಾಗಿ ಮೈಸೂರಿಗೆ ಆಗಮಿಸಿರುವ ಆಸ್ಟ್ರೇಲಿಯಾದ ವೇಗದ ಬೌಲರ್ ಬ್ರೆಟ್ ಲೀ, ಗುರುವಾರ ಮಧ್ಯಾಹ್ನ ದೇವರಾಜ ಕುಸ್ತಿ ಅಖಾಡಕ್ಕೆಳಿದು ಪೈಲ್ವಾನರೊಂದಿಗೆ ಸೆಣಸಿ ಮೈಕೈ ಮಣ್ಣು ಮಾಡಿಕೊಂಡರು. ಕ್ರಿಕೆಟಿಗನ ಪಟ್ಟುಗಳನ್ನು ಕಂಡು ವೀಕ್ಷಕರು ಖುಷಿಪಟ್ಟರು.

ಮೈಸೂರಿನಲ್ಲಿ ಆಸ್ಟ್ರೇಲಿಯನ್ ಕ್ರಿಕೆಟರ್ ಮಾರಾಮಾರಿ!

ಆಸ್ಟ್ರೇಲಿಯಾ ಪ್ರವಾಸೋದ್ಯಮ ರಾಯಭಾರಿಯಾಗಿ ಪರಿಣಿತಿ

ಗರಿಷ್ಠ: ೩೭° । ಕನಿಷ್ಠ: ೧೭° ಮೋಡಕವಿದ ವಾತಾವರಣ ಸಾಧಾರಣ ಮಳೆ ಸಂಭವ

ಬಾಲಿವುಡ್ ನಟಿ ಪರಿಣಿತಿ ಚೋಪ್ರಾ ಅವರನ್ನು ಆಸ್ಟ್ರೇಲಿಯಾದ ಪ್ರವಾಸೋದ್ಯಮ ಇಲಾಖೆ ರಾಯಭಾರಿಯನ್ನಾಗಿ ಆಯ್ಕೆ ಮಾಡಿದೆ. ಪರಿಣಿತಿ ಈ ಗೌರವ ಪಡೆದ ಮೊದಲ ಭಾರತೀಯ ಮಹಿಳೆ.

ಸಂಪುಟ: ೪೬ ಸಂಚಿಕೆ: ೨೪೧, ರಾಷ್ಟ್ರೀಯ ಶಕ ೧೯೩೯ ಶರತ್ –ಭಾದ್ರಪದ ೧೭ ● ಬಿದಿಗೆ– ಉತ್ತರಾಬಾದ್ರಾ, ಶುಕ್ರವಾರ, ಸೆ.೮, ೨೦೧೭, ದೂರವಾಣಿ: ೨೪೪೯೫೧೧, ೨೪೪೯೫೫೦೪, ೨೪೪೯೫೫೦೫, ಫ್ಯಾಕ್ಸ್: ೨೪೪೯೫೫೦೩, ಪುಟ: ೧೨+೪, ರೂ. ೩

ಮಂಗಳೂರು ಚಲೋ ವಿಫಲ

ಬೈಕ್ ರ‍್ಯಾಲಿಗೆ ತಡೆ; ನಿಷೇಧಾಜ್ಞೆ ಉಲ್ಲಂಘಿಸಿದ ಬಿಜೆಪಿ ನಾಯಕರ ಬಂಧನ

ಮಂಗಳೂರು,ಸೆ.೭– ಮುಂಬರುವ ವಿಧಾನಸಭಾ ಚುನಾವಣೆಯ ದೃಷ್ಟಿಯಿಂದ ಕರಾವಳಿ ಭಾಗದಲ್ಲಿ ಪಕ್ಷದ ಅಸ್ತಿತ್ವವನ್ನು ಮತ್ತಷ್ಟು ಗಟ್ಟಿಗೊಳಿಸುವ ಉದ್ದೇಶದಿಂದ ಬಿಜೆಪಿ ಹಮ್ಮಿಕೊಂಡಿದ್ದ ಬಹು ನಿರೀಕ್ಷಿತ 'ಮಂಗಳೂರು ಚಲೋ'ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸಮಾವೇಶ ಬಹುತೇಕ ವಿಫಲವಾಗಿದೆ. ನಿಷೇಧಾಜ್ಞೆ ಉಲ್ಲಂಘಿಸಿ ಮೋಟಾರ್ ಬೈಕ್ ರ‍್ಯಾಲಿಗೆ ಮುಂದಾದ ಬಿಜೆಪಿ ನಾಯಕರು ಮತ್ತು ನೂರಾರು ಕಾರ್ಯಕರ್ತರನ್ನು ಬಂಧಿಸಲಾಗಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ, ವಿಧಾನ ಸಭೆಯಲ್ಲಿನ ಪ್ರತಿಪಕ್ಷ ನಾಯಕ ಜಗದೀಶ್ ಶೆಟ್ಟರ್, ಉಪ ನಾಯಕ ಆರ್. ಅಶೋಕ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಕೆ.ಎಸ್.ಈಶ್ವರಪ್ಪ, ಸಂಸದ ನಳಿನ್ ಕುಮಾರ್ ಕಟೀಲ್, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷರೂ ಆದ ಸಂಸದ ಪ್ರತಾಪ ಸಿಂಹ ಸೇರಿದಂತೆ ಹಲವು ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರನ್ನು ಪೊಲೀಸರು ಗುರುವಾರ ಬಂಧಿಸಿದರು.

- ಜ್ಯೋತಿ ವೃತ್ತದಲ್ಲೇ ತಡೆದ ಪೊಲೀಸರು
- ನೆಹರು ಮೈದಾನ ದಲ್ಲಿ ನಡೆದ ಸಮಾವೇಶ
- ನಿರೀಕ್ಷಿಸಿದಷ್ಟಿರದ ಕಾರ್ಯಕರ್ತರು

ಬಿಜೆಪಿ ಗುರುವಾರ ಹಮ್ಮಿಕೊಂಡಿದ್ದ ಮಂಗಳೂರು ರಾಜ್ಯ ರ‍್ಯಾಲಿಯಲ್ಲಿ ಯುವಮೋರ್ಚಾ ಅಧ್ಯಕ್ಷರೂ ಆದ ಸಂಸದ ಪ್ರತಾಪ್ ಸಿಂಹ ಮಾತನಾಡಿದರು. ಬಿಜೆಪಿ ರಾಜ್ಯಾಧ್ಯಕ್ಷ ಜಿ.ಎಸ್.ಯಡಿಯೂರಪ್ಪ, ಜಗದೀಶ್ ಶೆಟ್ಟರ್, ಕೆ.ಎಸ್.ಈಶ್ವರಪ್ಪ, ಪ್ರಹ್ಲಾದ್ ಜೋಷಿ, ಅರವಿಂದ ಅಂಬಾವಷ, ಆರ್.ಅಶೋಕ್, ಶೋಭಾ ಕರಂದ್ಲಾಜೆ, ಸಿ.ಟಿ.ರವಿ ಮತ್ತಿತರರು ಚಿತ್ರದಲ್ಲಿದ್ದಾರೆ.

ಶಾಂತಿ ಕದಡಲು ಬಿಜೆಪಿ ರ‍್ಯಾಲಿ: ಸಿ.ಎಂ

ಬಿಜೆಪಿ ಬೈಕ್ ರ‍್ಯಾಲಿ ಮತ್ತು ಮಂಗಳೂರು ಸಮಾವೇಶ ಸಂಪೂರ್ಣ ವಿಫಲವಾಗಿದೆ. ಬಿಜೆಪಿಯ ಈ ಮಹತ್ವಾಕಾಂಕ್ಷೆಯ ಸಮಾವೇಶದಲ್ಲಿ ಕೇವಲ ೩ ಸಾವಿರ ಮಂದಿ ಭಾಗವಹಿಸಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಪುಟ ೮

ಕಣ್ಣೀರ್‌ಗಿಂದ ಎಸ್‌ಐಗೆ ಧಮ್ಕಿ

ರ‍್ಯಾಲಿಯಲ್ಲಿ ಪಾಲ್ಗೊಂಡಿದ್ದ ಬಿಜೆಪಿ ಮುಖಂಡರ ವಿರುದ್ಧ ಎಫ್‌ಐಆರ್ ದಾಖಲಿಸಿದ ದ್ಯಕ್ಕೆ ಕದ್ರಿ ಠಾಣೆ ಇನ್‌ಸ್ಪೆಕ್ಟರ್ ಮಾರುತಿ ಜಿ.ನಾಯ್ಕ್ ಅವರಿಗೆ ಸಂಸದ ನಳಿನ್ ಕುಮಾರ್ ಕಟೀಲ್, ವರ್ಷಾಣೆ ಬೆದರಿಕೆ ಹಾಕಿದ ವಿಡಿಯೊ ವೈರಲ್ ಆಗಿದ್ದು, ಭಾರೀ ಚರ್ಚೆ ಹುಟ್ಟು ಹಾಕಿದೆ.

ನಡುವೆ ಮಾತಿನ ಚಕಮಕಿ, ನೂಕಾಟ ತಳ್ಳಾಟ ನಡೆಯಿತು. ಮುಖಂಡರು ಮತ್ತು ಕಾರ್ಯಕರ್ತರು ನಡೆದುಕೊಂಡೇ ನಾಯಕರು ಮತ್ತು ಹಲವು ಕಾರ್ಯಕರ್ತರನ್ನು ಬಂಧಿಸಿದ ಕಾರ್ಯಕ್ರಮ ನಿಗದಿಯಾಗಿದ್ದ ನೆಹರೂ ಮೈದಾನಕ್ಕೆ ಪೊಲೀಸರು ಬಸ್‌ಗಳಲ್ಲಿ ಕರೆದೊಯ್ದರು. ಬಳಿಕ ಉಳಿದ ತೆರಳಿದರು. ಪುಟ ೮

ಗೌರಿ ಲಂಕೇಶ್ ಹತ್ಯೆ ಪ್ರಕರಣ

ತನಿಖೆ ಚುರುಕುಗೊಳಿಸಿದ ವಿಶೇಷ ತನಿಖಾ ತಂಡ

- ೧೩೭ ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿಗಳ ಪರಿಶೀಲನೆ
- ಗೌರಿ ಲಂಕೇಶ್ ದೂರವಾಣಿ ಕರೆಗಳ ಮಾಹಿತಿ ಸಂಗ್ರಹ
- ರೇಖಾಚಿತ್ರ ಆಧರಿಸಿ ಹಂತಕರ ಶೋಧ ಮುಂದುವರಿಕೆ

ಬೆಂಗಳೂರು,ಸೆ.೭– ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಪ್ರಕರಣದ ತನಿಖೆಯನ್ನು ವಿಶೇಷ ತನಿಖಾ ತಂಡ(ಎಸ್‌ಐಟಿ) ಚುರುಕುಗೊಳಿಸಿದೆ. ಗೌರಿ ಲಂಕೇಶ್ ಅವರ ಮನೆಯ ಸುತ್ತಲಿನ, ಅವರು ನಿತ್ಯ ಸಂಚರಿಸುತ್ತಿದ್ದ ಮಾರ್ಗದ ೧೩೦ಕ್ಕೂ ಅಧಿಕ ಸಿಸಿಟಿವಿ ಕ್ಯಾಮೆರಾಗಳಲ್ಲಿನ ದೃಶ್ಯಾವಳಿಗಳು ಹಾಗೂ ಇತ್ತೀಚಿನ ದೂರವಾಣಿ ಕರೆಗಳ ಮಾಹಿತಿಯನ್ನು ಸಂಗ್ರಹಿಸಿರುವ ಎಸ್‌ಐಟಿ ಅಧಿಕಾರಿಗಳು, ಹಂತಕರ ಬಗ್ಗೆ ಮಹತ್ವದ ಸುಳಿವುಗಳನ್ನು ಕಲೆಹಾಕುತ್ತಿದ್ದಾರೆ.

ಗೌರಿ ಲಂಕೇಶ್ ಹತ್ಯೆ ಪ್ರಕರಣದ ತನಿಖೆಗಾಗಿ ಮಂಗಳವಾರ ರಾತ್ರಿಯೇ ರಚಿಸಲಾಗಿದ್ದ ೩ ವಿಶೇಷ ಪೊಲೀಸ್ ತಂಡಗಳು ಈವರೆಗೆ ಸಂಗ್ರಹಿಸಿರುವ ಮಾಹಿತಿಗಳನ್ನು ಪಡೆದುಕೊಂಡಿರುವ ಎಸ್‌ಐಟಿ ಅಧಿಕಾರಿಗಳು, ಕೂಲಂಕಷವಾಗಿ ಪರಿಶೀಲನೆ ನಡೆಸಿದರು. ನಂತರ ರಾಜರಾಜೇಶ್ವರಿ ನಗರದ ಐಡಿಯಲ್ ಹೋಮ್‌ನಲ್ಲಿರುವ ಗೌರಿ ಲಂಕೇಶ್ ಅವರ ನಿವಾಸಕ್ಕೆ ತೆರಳಿ ಘಟನೆಗೆ ಸಂಬಂಧಿಸಿ ಮತ್ತಷ್ಟು ಮಾಹಿತಿಗಳನ್ನು ಕಲೆ ಹಾಕಿದರು.

ಗೌರಿ ಲಂಕೇಶ್ ಅವರ ನಿವಾಸದ ಸುತ್ತಮುತ್ತಲ ರಸ್ತೆಗಳಲ್ಲಿರುವ ೩೭ ಸಿಸಿ ಟಿವಿ ಕ್ಯಾಮೆರಾಗಳು ಹಾಗೂ ಗೌರಿ ಅವರ ಕಾರನ್ನು ಹಂತಕರು ಹಿಂಬಾಲಿಸಿ ಬಂದಿರುವ ರಸ್ತೆಗಳಲ್ಲಿನ ೧೦೦ಕ್ಕೂ ಹೆಚ್ಚು ಸಿಸಿ ಟಿವಿ ಕ್ಯಾಮೆರಾಗಳ ದತ್ತಾಂಶಗಳನ್ನು ಪಡೆದುಕೊಂಡಿರುವ ಎಸ್‌ಐಟಿ ಅಧಿಕಾರಿಗಳು, ಅದರಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ವೀಕ್ಷಿಸುತ್ತಾ ತನಿಖೆಗೆ ಸಹಕಾರಿಯಾಗಬಲ್ಲ ಅಂಶಗಳನ್ನು ಸಂಗ್ರಹಿಸುತ್ತಿದ್ದಾರೆ.

ಗೌರಿ ಅವರ ಮನೆಯಲ್ಲಿ ಅಳವಡಿಸಿದ್ದ ೪ ಸಿಸಿಟಿವಿ ಕ್ಯಾಮೆರಾದಲ್ಲಿನ ದೃಶ್ಯಾವಳಿಗಳು ಅಷ್ಟೊಂದು ಸ್ಪಷ್ಟವಾಗಿ ದಾಖಲಾಗಿಲ್ಲ. ಹತ್ಯೆ ನಡೆದಿದ್ದು ರಾತ್ರಿ ೮ ಗಂಟೆಗೆ. ಆಗ ಮನೆ ಅಂಗಳದಲ್ಲಿ ಕತ್ತಲಿದ್ದರಿಂದ ಮುಂಬಾಗಿಲ ಬಳಿ ಅಳವಡಿಸಿದ್ದ ಕ್ಯಾಮೆರಾದಲ್ಲಿ ದಾಖಲಾಗಿರುವ ದೃಶ್ಯಗಳಲ್ಲಿ ಆರೋಪಿಯ ಚಹರೆ ಸರಿಯಾಗಿ ಕಾಣಿಸುತ್ತಿಲ್ಲ. ಮಸುಕಾಗಿರುವ ದೃಶ್ಯಾವಳಿಗಳನ್ನು ಸ್ಪಷ್ಟವಾಗಿ ವೀಕ್ಷಿಸಲು ಸಾಧ್ಯವಾಗುವಂತೆ ಆಧುನಿಕ ತಂತ್ರಜ್ಞಾನದ ನೆರವನ್ನೂ ಪಡೆದುಕೊಳ್ಳಲಾಗಿದೆ.

ಇನ್ನೊಂದೆಡೆ, ಗೌರಿ ಲಂಕೇಶ್ ಅವರ ಫೋನ್ ಕರೆಗಳ ಸಿಡಿಆರ್ ಪರಿಶೀಲಿಸುತ್ತಿರುವ ಅಧಿಕಾರಿಗಳು, ಹತ್ಯೆಯಾಗುವುದಕ್ಕೂ ಕೆಲ ಗಂಟೆಗಳ ಮುಂಚಿನ ಕರೆಗಳು, ಮಿಸ್ಡ್ ಕಾಲ್‌ಗಳ ಮತ್ತು ಮೆಸೇಜ್‌ಗಳ ಅಧ್ಯಯನ ನಡೆಸುತ್ತಿದ್ದಾರೆ. ಸ್ಥಳೀಯರ ಮಾಹಿತಿ ಆಧರಿಸಿ ರಚಿಸಲಾಗಿರುವ ಹಂತಕರ ರೇಖಾಚಿತ್ರ ಹೋಲುವವರಿಗಾಗಿ ಶೋಧ ಆರಂಭಿಸಿದ್ದಾರೆ.

ಘಟನೆ ಸ್ಥಳದಲ್ಲಿನ ಬೆರಳಚ್ಚು ಆಧರಿಸಿಯೂ ತನಿಖೆ ನಡೆಸುವಂತೆ ಬಿ.ಕೆ.ಸಿಂಗ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವಿಚಾರವಾದಿಗಳಾದ ಎಂ.ಎಂ.ಕಲಬುರ್ಗಿ, ದಾಭೋಲ್ಕರ್,ಕಲಬುರ್ಗಿ ಅವರ ಹತ್ಯೆ ಪ್ರಕರಣಗಳಲ್ಲಿ ಇಲ್ಲಿಯವರೆಗೆ ನಡೆದಿರುವ ತನಿಖೆಯ ವಿವರಗಳನ್ನೂ ಎಸ್‌ಐಟಿ ಪಡೆದುಕೊಂಡಿದೆ. ಪುಟ ೮

ದೂರು ದಾಖಲಿಸಿದ ಕವಿತಾ ಲಂಕೇಶ್

ಗೌರಿ ಲಂಕೇಶ್ ಹತ್ಯೆ ಬಗ್ಗೆ ಸಹೋದರಿ ಕವಿತಾ ಲಂಕೇಶ್ ರಾಜರಾಜೇಶ್ವರಿನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಭಾರತೀಯ ದಂಡ ಸಂಹಿತೆ(ಐಪಿಸಿ)ಯ ಕಲಂ ೩೦೨ ಹಾಗೂ ಶಸ್ತ್ರಾಸ್ತ್ರ ಕಾಯ್ದೆಯಡಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ದಸರಾ ಉದ್ಘಾಟನೆಗೆ ನಿತ್ಯೋತ್ಸವ ಕವಿಗೆ ಅಧಿಕೃತ ಆಹ್ವಾನ...

ನಾಡಹಬ್ಬ ದಸರಾ ಉದ್ಘಾಟನೆಗೆ ಆಗಮಿಸುವಂತೆ ನಿತ್ಯೋತ್ಸವ ಕವಿ ಕೆ.ಎಸ್.ನಿಸಾರ್ ಅಹಮದ್ ಅವರಿಗೆ ಜಿಲ್ಲಾಡಳಿತದಿಂದ ಗುರುವಾರ ಅಧಿಕೃತ ಆಹ್ವಾನ ನೀಡಲಾಯಿತು. ನಿಸಾರ್ ಅವರ ಬೆಂಗಳೂರಿನ ನಿವಾಸಕ್ಕೆ ತೆರಳಿದ ಜಿಲ್ಲಾಧಿಕಾರಿ ಡಿ.ರಂದೀಪ್, ಮಹಾಪೌರ ಎಂ.ಜೆರಿಪಿಕುಮಾರ್, ಅವರ ಜಿಲ್ಲಾಧಿಕಾರಿ ಯೋಗೇಶ್, ಪಾಲಿಕೆ ಹೆಚ್ಚುವರಿ ಆಯುಕ್ತ ರಾಜು, ದಸರಾ ಸ್ವಾಗತ ಸಮಿತಿ ಕಾರ್ಯದರ್ಶಿ ಜಿ.ಮಹೇಶ್ ಶಾಲು ಹೊದಿಸಿ, ಮತ್ತುಗುಚ್ಛ ನೀಡಿ ಆಹ್ವಾನ ನೀಡಿದರು.

ಆಶಾ ಕಾರ್ಯಕರ್ತೆಯರಿಂದ ಅಹೋರಾತ್ರಿ ಧರಣಿ ಆರಂಭ

ಬೆಂಗಳೂರು,ಸೆ.೭– ಮಾಸಿಕ ವೇತನ ನಿಗದಿ, ಕೆಲಸ ಖಾಯಂ ಮಾಡಬೇಕೆಂದು ಒತ್ತಾಯಿಸಿ ರಾಜ್ಯದ ವಿವಿಧೆಡೆಯಿಂದ ನಗರಕ್ಕೆ ಸಾವಿರಾರು ಸಂಖ್ಯೆಯಲ್ಲಿ ಬಂದಿರುವ ಆಶಾ ಕಾರ್ಯಕರ್ತೆಯರು, ಗುರುವಾರದಿಂದ ಅಹೋರಾತ್ರಿ ಹೋರಾಟ ಪ್ರಾರಂಭಿಸಿದ್ದಾರೆ.

ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ನೇತೃತ್ವದಲ್ಲಿ ನಗರದ ರೇಸ್ ಕೋರ್ಸ್ ರಸ್ತೆಯಲ್ಲಿರುವ ಸ್ವಾತಂತ್ರ್ಯ ಉದ್ಯಾನವನದ ಆವರಣದಲ್ಲಿ ಧರಣಿ ಆರಂಭಿಸಿದ್ದಾರೆ. ಕಾರ್ಯಕರ್ತೆಯರು ತಮ್ಮ ಪುಟ್ಟ ಮಕ್ಕಳನ್ನು ಜತೆಗೇ ಕರೆತಂದಿದ್ದು, ಬಯಲಿನಲ್ಲೇ ಮಕ್ಕಳ ಲಾಲನೆ, ಪಾಲನೆ ಮಾಡುತ್ತಿದ್ದಾರೆ. ಮಳೆಯ ನಡುವೆಯೇ ಧರಣಿ ಆರಂಭಿಸಿರುವ ಕಾರ್ಯಕರ್ತೆಯರಿಗೆ ಆಗತ್ಯ ವ್ಯವಸ್ಥೆ ಮಾಡಿಕೊಡಲಾಗಿದೆ. ಪುಟ ೩

ಕೆಲಸ ಖಾಯಂಗೆ ಆಗ್ರಹಿಸಿ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ

ಚುಂಚನಕಟ್ಟೆ ಸಕ್ಕರೆ ಕಾರ್ಖಾನೆ ಖಾಸಗಿ ಗುತ್ತಿಗೆ, ಇಲ್ಲ ಮಾರಾಟ

ಬೆಂಗಳೂರು,ಸೆ.೭– ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲ್ಲೂಕಿನ ಚುಂಚನಕಟ್ಟೆಯಲ್ಲಿರುವ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಗುತ್ತಿಗೆ ಆಧಾರದ ಮೇಲೆ ಖಾಸಗಿಯವರಿಗೆ ವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸಭೆಯಲ್ಲಿ ಗುರುವಾರ ನಿರ್ಧರಿಸಲಾಯಿತು.

ಟೆಂಡರ್‌ಗೆ ಪ್ರತಿಕ್ರಿಯೆ ಬಾರದಿದ್ದರೆ ಕಾರ್ಖಾನೆ ಮಾರಾಟ: ಸಿಎಂ ನೇತೃತ್ವದ ಸಭೆ ನಿರ್ಧಾರ

ಮೈಸೂರು, ಮಂಡ್ಯ ಮತ್ತು ಬೀದರ್ ಜಿಲ್ಲೆಗಳಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಸಲುವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಕ್ಕರೆ ಸಚಿವೆ ಡಾ.ಗೀತಾ ಮಹದೇವಪ್ರಸಾದ್ ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹಾಗೂ ಮೂರೂ ಜಿಲ್ಲೆಗಳ ಶಾಸಕರು ಮತ್ತು ಅಧಿಕಾರಿಗಳೊಂದಿಗೆ ವಿಧಾನ ಸೌಧದಲ್ಲಿ ಗುರುವಾರ ಸುದೀರ್ಘ ಸಭೆ ನಡೆಸಿದರು. ಪುಟ ೮

ದುರಂತವನ್ನೂ ಸಂಭ್ರಮಿಸುವ ಕೊಳಕು ಮನಸುಗಳು ಪುಟ ೮

ಗುಂಡಿ ಬಿದ್ದ ರಸ್ತೆ; ಸಂಚಾರ ಅವ್ಯವಸ್ಥೆ ಪುಟ ೫

ಬುದ್ಧಿಮಾಂದ್ಯ ಬಾಲಕಿ ಮೇಲೆ ಅತ್ಯಾಚಾರ ಪುಟ ೮

ಮೈಸೂರು NECC
ಕೋಳಿ ಮೊಟ್ಟೆ ಫಾರಂನಿಂದ
100ಕ್ಕೆ Rs. 393
ದೂರವಾಣಿ: 2425156